**ಈ ಪ್ರಶ್ನೆಪುಸ್ತಿಕೆಯನ್ನು ತೆರೆಯುವಂತೆ ನಿಮಗೆ ತಿಳಿಸುವವರೆಗೂ ಇದನ್ನು ತೆರೆಯಕೂಡದು**

2071037

**2020**

**ಪ್ರಶ್ನೆ ಪುಸ್ತಿಕೆ**

**ಪ್ರಶ್ನೆ ಪತ್ರಿಕೆ ಶ್ರೇಣಿ**

**A**

# ಸಾಮಾನ್ಯ ಜ್ಞಾನ (ಪತ್ರಿಕೆ I)

**ವಿಷಯ ಸಂಕೇತ : 372**

***ಗರಿಷ್ಠ ಸಮಯ : 2 ಗಂಟೆಗಳು*** | ***ಗರಿಷ್ಠ ಅಂಕಗಳು : 100***

## ಸೂಚನೆಗಳು

1. ಪರೀಕ್ಷೆ ಪ್ರಾರಂಭವಾದ ಕೂಡಲೇ ನಿಮ್ಮ ಪ್ರಶ್ನೆ ಪತ್ರಿಕೆಯಲ್ಲಿ ಮುದ್ರಿತವಾಗದ ಅಥವಾ ಹರಿದಿರುವ ಅಥವಾ ಬಿಟ್ಟು ಹೋಗಿರುವ ಪುಟಗಳು ಅಥವಾ ಪ್ರಶ್ನೆಗಳು ಇತ್ಯಾದಿಗಳು ಕಂಡು ಬಂದಲ್ಲಿ ನಿಮ್ಮ ಓ.ಎಂ.ಆರ್. ಉತ್ತರ ಹಾಳೆಯಲ್ಲಿ ಮುದ್ರಿತವಾಗಿರುವ ಅದೇ ಶ್ರೇಣಿಯ ಪೂರ್ಣ ಪ್ರಶ್ನೆ ಪತ್ರಿಕೆಯೊಂದಿಗೆ ಬದಲಾಯಿಸಿಕೊಳ್ಳತಕ್ಕದ್ದು. ಒಂದು ವೇಳೆ ಅಭ್ಯರ್ಥಿಯು ಪ್ರಶ್ನೆ ಪತ್ರಿಕೆಯಲ್ಲಿನ ಪುಟಗಳನ್ನು ಸರಿಯಾಗಿ ಪರಿಶೀಲಿಸದೇ ದೋಷಪೂರಿತ ಪ್ರಶ್ನೆ ಪತ್ರಿಕೆಯನ್ನೇ ಉಪಯೋಗಿಸಿದಲ್ಲಿ ಇದಕ್ಕೆ ಅಭ್ಯರ್ಥಿಯೇ ಹೊಣೆಗಾರರಾಗಿರುತ್ತಾರೆ.
2. OMR ಉತ್ತರ ಹಾಳೆಯಲ್ಲಿ ಮತ್ತು ಪ್ರವೇಶ ಪತ್ರದಲ್ಲಿ ನೀಡಿರುವ ಸೂಚನೆಗಳನ್ನು ಓದಿಕೊಳ್ಳತಕ್ಕದ್ದು.
3. **ಅಭ್ಯರ್ಥಿಯ ಪ್ರಶ್ನೆಪತ್ರಿಕೆಯ ಶ್ರೇಣಿಯು, ತಮ್ಮ ಓ.ಎಂ.ಆರ್. ಉತ್ತರ ಹಾಳೆಯಲ್ಲಿ ಮುದ್ರಿತವಾಗಿರುವ ಅದೇ ಪ್ರಶ್ನೆಪತ್ರಿಕೆಯ ಶ್ರೇಣಿಯಾಗಿರುವುದೇ ಎಂಬುದನ್ನು ಖಚಿತಪಡಿಸಿಕೊಳ್ಳಬೇಕು. ವ್ಯತ್ಯಾಸಗಳು ಕಂಡುಬಂದಲ್ಲಿ, ಸಂವೀಕ್ಷಕರ ಗಮನಕ್ಕೆ ತರುವುದು ಮತ್ತು ತಮ್ಮ ಓ.ಎಂ.ಆರ್. ಉತ್ತರ ಹಾಳೆಯಲ್ಲಿ ಮುದ್ರಿತವಾಗಿರುವ ಶ್ರೇಣಿಯ ಪ್ರಶ್ನೆ ಪತ್ರಿಕೆಯನ್ನೇ ಪಡೆಯತಕ್ಕದ್ದು.**
4. ಎಲ್ಲಾ ಪ್ರಶ್ನೆಗಳಿಗೂ ಸಮಾನ ಅಂಕಗಳು ಇರುತ್ತವೆ.
5. ಪಕ್ಕದಲ್ಲಿ ಒದಗಿಸಿರುವ ಪ್ರಶ್ನೆಪತ್ರಿಕೆಯ ಚೌಕದಲ್ಲೇ ನಿಮ್ಮ ನೋಂದಣಿ ಸಂಖ್ಯೆಯನ್ನು ನಮೂದಿಸಬೇಕು. ಪ್ರಶ್ನೆ ಪುಸ್ತಿಕೆಯಲ್ಲಿ ಬೇರೆ ಏನನ್ನೂ ಬರೆಯಬಾರದು.

| ನೋಂದಣಿ ಸಂಖ್ಯೆ | | | | | | |
|---|---|---|---|---|---|---|
| | | | | | | |

6. ಈ ಪ್ರಶ್ನೆ ಪುಸ್ತಿಕೆ **100** ಪ್ರಶ್ನೆಗಳನ್ನು ಒಳಗೊಂಡಿರುತ್ತದೆ. ಪ್ರತಿಯೊಂದು ಪ್ರಶ್ನೆಯು **4** ಆಯ್ಕೆಗಳನ್ನು ಒಳಗೊಂಡಿರುತ್ತದೆ. ನೀವು ಉತ್ತರ ಹಾಳೆಯಲ್ಲಿ ಗುರುತು ಮಾಡಬೇಕೆನಿಸುವ ಉತ್ತರವನ್ನು ಆಯ್ಕೆ ಮಾಡಿಕೊಳ್ಳಿ. ಒಂದು ವೇಳೆ ಅಲ್ಲಿ ಒಂದಕ್ಕಿಂತ ಹೆಚ್ಚು ಸರಿಯಾದ ಉತ್ತರಗಳಿವೆಯೆಂದು ನೀವು ಭಾವಿಸಿದರೆ ನಿಮಗೆ ಅತ್ಯುತ್ತಮವೆನಿಸುವ ಉತ್ತರಕ್ಕೆ ಗುರುತು ಮಾಡಿ. ಏನೇ ಆದರೂ ಪ್ರತಿ ಪ್ರಶ್ನೆಗೆ ನೀವು ಕೇವಲ ಒಂದು ಉತ್ತರವನ್ನು ಮಾತ್ರ ಆಯ್ಕೆ ಮಾಡಬೇಕು. ಒಂದು ವೇಳೆ ಒಂದಕ್ಕಿಂತ ಹೆಚ್ಚಿನ ಉತ್ತರಗಳನ್ನು ಎನ್‌ಕೋಡ್ ಮಾಡಿದಲ್ಲಿ ಆ ಉತ್ತರಗಳನ್ನು ಅಸಿಂಧುವೆಂದು ಪರಿಗಣಿಸಲಾಗುವುದು.
7. ಪ್ರಶ್ನೆಗಳು ಕನ್ನಡ ಮತ್ತು ಆಂಗ್ಲ ಎರಡೂ ಭಾಷೆಗಳಲ್ಲಿರುತ್ತವೆ. ಕನ್ನಡ ಪ್ರಶ್ನೆಗಳಲ್ಲಿ ಸಂದೇಹ ಉಂಟಾದರೆ, ದಯವಿಟ್ಟು ಆಂಗ್ಲಭಾಷೆಯ ಪ್ರಶ್ನೆಗಳನ್ನು ಗಮನಿಸುವುದು. ಪ್ರಶ್ನೆಪತ್ರಿಕೆಯ ಪ್ರಶ್ನೆಗಳಲ್ಲಿ ಯಾವುದೇ ಗೊಂದಲಗಳಿದ್ದರೂ ಆಂಗ್ಲಭಾಷೆಯ ಪ್ರಶ್ನೆಗಳೇ ಅಂತಿಮವಾಗಿರುತ್ತದೆ ಎಂಬುದನ್ನು ದಯವಿಟ್ಟು ಗಮನಿಸತಕ್ಕದ್ದು.
8. ಎಲ್ಲಾ ಉತ್ತರಗಳನ್ನು ನಿಮಗೆ ಒದಗಿಸಲಾಗಿರುವ ಪ್ರತ್ಯೇಕ ಓ.ಎಂ.ಆರ್. ಉತ್ತರ ಹಾಳೆಯ ಮೇಲೆ ಕೇವಲ ಕಪ್ಪು ಅಥವಾ ನೀಲಿ ಶಾಯಿಯ ಬಾಲ್‌ಪಾಯಿಂಟ್ ಪೆನ್ನಿನಲ್ಲಿ ಮಾತ್ರ ಗುರುತು ಮಾಡಬೇಕು.
9. **ಅಭ್ಯರ್ಥಿಯು ತಮ್ಮ personalized ಓ.ಎಂ.ಆರ್. ಉತ್ತರ ಹಾಳೆಯಲ್ಲಿ ಮುದ್ರಿತವಾಗಿರುವ ಪ್ರಶ್ನೆಪತ್ರಿಕೆ ಶ್ರೇಣಿಯು, ನಾಮಿನಲ್ ರೋಲ್‌ನ ತಮ್ಮ ಅಂಕಣದಲ್ಲಿ ಮುದ್ರಿತವಾಗಿರುವ ಪ್ರಶ್ನೆಪತ್ರಿಕೆ ಶ್ರೇಣಿಯು ಒಂದೇ ಆಗಿರುವುದೇ ಎಂಬುದನ್ನು ಖಚಿತಪಡಿಸಿಕೊಳ್ಳತಕ್ಕದ್ದು. ವ್ಯತ್ಯಾಸ ಕಂಡು ಬಂದಲ್ಲಿ ಅಭ್ಯರ್ಥಿಯು ಯಾವ ಶ್ರೇಣಿಯ ಪ್ರಶ್ನೆಪತ್ರಿಕೆಯನ್ನು ಉಪಯೋಗಿಸಿರುತ್ತಾರೆ ಎಂಬುದರ ಬಗ್ಗೆ ಮುಚ್ಚಳಿಕೆ ಪತ್ರವನ್ನು ನೀಡತಕ್ಕದ್ದು. ಇಲ್ಲದಿದ್ದಲ್ಲಿ ಅಭ್ಯರ್ಥಿಯ ಓ.ಎಂ.ಆರ್. ಉತ್ತರ ಹಾಳೆಯಲ್ಲಿ ಮುದ್ರಿತವಾಗಿರುವ ಪ್ರಶ್ನೆಪತ್ರಿಕೆಯ ಶ್ರೇಣಿಯನ್ನೇ ಮೌಲ್ಯಮಾಪನಕ್ಕೆ ಪರಿಗಣಿಸಲಾಗುವುದು.**
10. ಒಂದು ವೇಳೆ ಅಭ್ಯರ್ಥಿಯು ಬೇರೊಬ್ಬ ಅಭ್ಯರ್ಥಿಯ personalized ಓ.ಎಂ.ಆರ್. ಉತ್ತರ ಹಾಳೆಯಲ್ಲಿ ಉತ್ತರಿಸಿದ್ದಲ್ಲಿ ಅಂತಹ ಓ.ಎಂ.ಆರ್. ಉತ್ತರ ಹಾಳೆಯನ್ನು ಅಸಿಂಧುವೆಂದು ಪರಿಗಣಿಸಲಾಗುವುದು.
11. ಅಭ್ಯರ್ಥಿಯು Non-personalized ಓ.ಎಂ.ಆರ್. ಉತ್ತರ ಹಾಳೆಯಲ್ಲಿ ಉತ್ತರಿಸಿದಲ್ಲಿ ಅಭ್ಯರ್ಥಿಯು ನೋಂದಣಿ ಸಂಖ್ಯೆಯನ್ನು ಒದಗಿಸಿರುವ ಸ್ಥಳದಲ್ಲಿ ಬರೆದು ಸಂಬಂಧಪಟ್ಟ ವೃತ್ತವನ್ನು ತುಂಬಬೇಕು ಹಾಗೂ ತಮ್ಮ ಪ್ರಶ್ನೆಪತ್ರಿಕೆ ಶ್ರೇಣಿಯನ್ನು ಕಡ್ಡಾಯವಾಗಿ ಬರೆಯಬೇಕು ಮತ್ತು ನಿಗದಿಪಡಿಸಿದ ಸ್ಥಳದಲ್ಲಿ ಸಹಿ ಮಾಡಬೇಕು. ಇಲ್ಲದಿದ್ದಲ್ಲಿ, ಅಂತಹ ಅಭ್ಯರ್ಥಿಯ ಓ.ಎಂ.ಆರ್. ಉತ್ತರ ಹಾಳೆಯನ್ನು ಅಸಿಂಧುವೆಂದು ಪರಿಗಣಿಸಲಾಗುವುದು.
12. ನಾಮಿನಲ್ ರೋಲ್ (ಹಾಜರಾತಿ ಹಾಳೆ) ನಲ್ಲಿ ಅಭ್ಯರ್ಥಿಯು ತಪ್ಪದೇ ಸಹಿ ಹಾಕತಕ್ಕದ್ದು.
13. ಅಭ್ಯರ್ಥಿಯು ಮೇಲ್ಕಂಡ ಯಾವುದೇ ಸೂಚನೆಗಳನ್ನು ಉಲ್ಲಂಘಿಸಿದಲ್ಲಿ ಅಂತಹ ಓ.ಎಂ.ಆರ್. ಉತ್ತರ ಹಾಳೆಯನ್ನು ಅಸಿಂಧುವೆಂದು ಪರಿಗಣಿಸಲಾಗುವುದು.
14. ಪರೀಕ್ಷೆಯ ಮುಕ್ತಾಯವನ್ನು ಸೂಚಿಸುವ ಅಂತಿಮ ಗಂಟೆ ಬಾರಿಸಿದ ತಕ್ಷಣವೇ ಓ.ಎಂ.ಆರ್. ಉತ್ತರ ಹಾಳೆಯಲ್ಲಿ ಇನ್ನಾವುದೇ ಗುರುತುಮಾಡುವುದನ್ನು ನಿಲ್ಲಿಸಬೇಕು. ಸಂವೀಕ್ಷಕರು ಬಂದು ನಿಮ್ಮಲ್ಲಿರುವ ಓ.ಎಂ.ಆರ್. ಉತ್ತರ ಹಾಳೆಯನ್ನು ತಮ್ಮ ವಶಕ್ಕೆ ಪಡೆದುಕೊಂಡು ಲೆಕ್ಕಕ್ಕೆ ತೆಗೆದುಕೊಳ್ಳುವವರೆಗೂ ನಿಮ್ಮ ಆಸನದಲ್ಲಿಯೇ ಕುಳಿತಿರತಕ್ಕದ್ದು.
15. ಪರೀಕ್ಷೆ ಮುಗಿದ ನಂತರ ಸಂವೀಕ್ಷಕರಿಂದ ಹಿಂಪಡೆದ ಕಾರ್ಬನ್ ರಹಿತ ಓ.ಎಂ.ಆರ್. ಉತ್ತರ ಹಾಳೆಯ ಪ್ರತಿಯನ್ನು ಅಂತಿಮ ಆಯ್ಕೆಪಟ್ಟಿಯನ್ನು ಪ್ರಕಟಿಸುವವರೆಗೆ ಜೋಪಾನವಾಗಿ ಸಂರಕ್ಷಿಸಿಟ್ಟುಕೊಳ್ಳಬೇಕು ಮತ್ತು ಆಯೋಗವು ಯಾವುದೇ ಸಂದರ್ಭದಲ್ಲಿ ಹಾಜರುಪಡಿಸಲು ಸೂಚಿಸಿದಲ್ಲಿ, ತಪ್ಪದೇ ಹಾಜರುಪಡಿಸಬೇಕು.
16. ಚಿತ್ತು ಕೆಲಸಕ್ಕಾಗಿ ಹಾಳೆಗಳನ್ನು ಪ್ರಶ್ನೆಪತ್ರಿಕೆಯ ಕೊನೆಯಲ್ಲಿ ಸೇರಿಸಲಾಗಿದೆ. ಪ್ರಶ್ನೆಪತ್ರಿಕೆಯ ಇನ್ನುಳಿದ ಯಾವ ಭಾಗದಲ್ಲಿಯೂ ನೀವು ಯಾವುದೇ ರೀತಿಯ ಗುರುತನ್ನು ಮಾಡತಕ್ಕದಲ್ಲ.

**ಯಾವುದೇ ರೀತಿಯ ಮೊಬೈಲ್ ಫೋನ್‌ಗಳು, ಸ್ಮಾರ್ಟ್ ವಾಚ್‌ಗಳು, ಕ್ಯಾಲ್ಕ್ಯುಲೇಟರ್‌ಗಳನ್ನು ಅಥವಾ ಇತರೆ ಎಲೆಕ್ಟ್ರಾನಿಕ್ ಉಪಕರಣಗಳನ್ನು ಪರೀಕ್ಷಾ ಆವರಣಗಳಲ್ಲಿ ತರುವುದನ್ನು ನಿಷೇಧಿಸಲಾಗಿದೆ.**

***Note :*** *English version of the instructions is printed on the back cover of this booklet.*



SEAL